ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಗ್ರಾಮ ಪಂಚಾಯಿತಿಗಳ ಕ್ರಿಯಾ ಯೋಜನೆ ವಿಳಂಬ ಆಗುತ್ತಿರುವ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

058 (338) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮಪಂಚಾಯಿತಿಗಳ ಕ್ರಿಯಾ ಯೋಜನೆಯನ್ನು ಮಂಜೂರು ಮಾಡುವಾಗ ವಿಳಂಬ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಹಿಂದೆ ಕ್ರಿಯಾ ಯೋಜನೆಯನ್ನು ತಾಲ್ಲೂಕು ಪಂಚಾಯಿತಿಯ ಆಡಳಿತಾಧಿಕಾರಿಗಳು ಮಂಜೂರು ಮಾಡುತ್ತಿದ್ದು,ಸರ್ಕಾರದ ಆದೇಶದ ಪ್ರಕಾರ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಅಧಿಕಾರ ನೀಡಿರುವುದು ನಿಜವೇ ;

(ಇ) ಈ ಆದೇಶದಿಂದ ಕ್ರಿಯಾ ಯೋಜನೆ ಮಂಜೂರಾತಿಗೆ ತೊಂದರೆಯಾಗುತ್ತಿದ್ದು, ಈ ಹಿಂದೆ ಇದ್ದಂತೆ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಮಂಜೂರಾತಿ ನೀಡಲು ಅಧಿಕಾರ ನೀಡಲಾಗುವುದೇ ?